**Akashvani : Bangalore**
**Regional Bulletin In Kannada**
**28.02.2025 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ದ್ವಿತೀಯ ಪಿಯುಸಿ ಪರೀಕ್ಷೆ ನಾಳೆಯಿಂದ ಆರಂಭ; ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ ಸಕಲ ಸಿದ್ಧತೆ**

**೨. ಇಂದು ರಾಷ್ಟ್ರೀಯ ವಿಜ್ಞಾನ ದಿನ; ವಿಜ್ಞಾನ, ತಂತ್ರಜ್ಞಾನ ಮನುಷ್ಯ ಜೀವನದ ಅವಿಭಾಜ್ಯ ಅಂಗ - ಮುಖ್ಯಮಂತ್ರಿ ಸಿದ್ದರಾಮಯ್ಯ**

**೩. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹಕ್ಕಿಜ್ವರ ಪತ್ತೆ: ಕೋಳಿಸಾಕಾಣಿಕೆ, ಸಾಗಾಟ ನಿರ್ಬಂಧಿಸಿ ಜಿಲ್ಲಾಧಿಕಾರಿ ಆದೇಶ**

**೪. ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತಕ್ಕೆ 'ಎ' ಶ್ರೇಯಾಂಕದ ಗರಿಮೆ**

**<><*<><>*><>**

ದ್ವಿತೀಯ ಪಿಯುಸಿ ಪರೀಕ್ಷೆಗಳು ನಾಳೆಯಿಂದ ಆರಂಭವಾಗಲಿದ್ದು, ಯಾವುದೇ ಲೋಪವಾಗದಂತೆ ಸುಗಮ ಪರೀಕ್ಷೆಗಾಗಿ ಪದವಿಪೂರ್ವ ಶಿಕ್ಷಣ ಇಲಾಖೆ ಸಕಲ ಸಿದ್ಧತೆ ಮಾಡಿಕೊಂಡಿದೆ. ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯಲ್ಲಿ ೪೩ ಪರೀಕ್ಷಾ ಕೇಂದ್ರ ಸ್ಥಾಪಿಸಲಾಗಿದ್ದು, ಈ ಬಾರಿ ೧೪ ಸಾವಿರದ ೮೯೬ ವಿದ್ಯಾರ್ಥಿಗಳು ಹಾಗೂ ೧೫ ಸಾವಿರದ ೫೩೮ ವಿದ್ಯಾರ್ಥಿನಿಯರು ಸೇರಿದಂತೆ ಒಟ್ಟು ೩೦ ಸಾವಿರದ ೪೩೪ ವಿದ್ಯಾರ್ಥಿಗಳು ಪರೀಕ್ಷೆಗೆ ಹೆಸರು ನೋಂದಾಯಿಸಿಕೊಂಡಿದ್ದಾರೆ ಎಂದು ಪದವಿಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಟಿ.ಪಾಲಾಕ್ಷ ಹೇಳಿದ್ದಾರೆ. ಕಲಬುರಗಿ ಜಿಲ್ಲೆಯಲ್ಲಿ ೫೧ ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾಗಿದ್ದು, ಯಾವುದೇ ಅಹಿತಕರ ಘಟನೆಗೆ ಅವಕಾಶ ಮಾಡಿಕೊಡದೇ ಪಾರದರ್ಶಕ ರೀತಿಯಲ್ಲಿ ಪರೀಕ್ಷೆ ನಡೆಸಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಸೂಚನೆ ನೀಡಿದರು. ಧಾರವಾಡ ಜಿಲ್ಲೆಯಲ್ಲಿ ಈ ಬಾರಿ ಒಟ್ಟು ೨೬ ಸಾವಿರದ ೮೩೦ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಜಿಲ್ಲೆಯಲ್ಲಿ ಒಟ್ಟಾರೆ ೧೬೩ ಕಾಲೇಜುಗಳಿದ್ದು, ೪೧ ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದೆ. ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ. ಪ್ರಶ್ನೆಪತ್ರಿಕೆ ಮಾರ್ಗಾಧಿಕಾರಿಗಳ ವಾಹನಗಳಿಗೆ ಜಿಪಿಎಸ್ ಅಳವಡಿಸಲಾಗುವುದು. ಪರೀಕ್ಷಾ ಕೇಂದ್ರಗಳ ಘಟನಾವಳಿಗಳನ್ನು ವೀಕ್ಷಿಸಲು ಲೈವ್ ವೆಬ್ ಕಾಸ್ಟಿಂಗ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಹಾವೇರಿ ಜಿಲ್ಲೆಯ ೨೨ ಕೇಂದ್ರಗಳಲಿ ಪರೀಕ್ಷೆಗಳು ನಡೆಯಲಿದ್ದು, ಈ ಬಾರಿ ೧೪ ಸಾವಿರದ೬೦೦ ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಪ್ರಭಾರ ಉಪನಿರ್ದೇಶಕ ಆನಂದ ಮುದಕಮ್ಮನವರ ತಿಳಿಸಿದ್ದಾರೆ. ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಲಾಗಿದೆ. ಪರೀಕ್ಷಾರ್ಥಿಗಳು ರಿಸ್ಟ್ ವಾಚ್ ಧರಿಸುವಂತಿಲ್ಲ, ಪರೀಕ್ಷಾ ಕೇಂದ್ರದಲ್ಲಿ ಮುಖ್ಯ ಅಧೀಕ್ಷಕರು ಹೊರತುಪಡಿಸಿ, ಯಾವೊಬ್ಬ ಅಧಿಕಾರಿ ಅಥವಾ ಸಿಬ್ಬಂದಿ ಮೊಬೈಲ್ ಬಳಕೆಯನ್ನು ನಿಷೇಧಿಸಲಾಗಿದೆ. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ತಮ್ಮ ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರದವರೆಗೆ ಪರೀಕ್ಷಾ ಪ್ರವೇಶ ಪತ್ರವನ್ನು ತೋರಿಸಿ, ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಿದೆ.

**<><*<><>*><>**

ಇಂದು ರಾಷ್ಟ್ರೀಯ ವಿಜ್ಞಾನ ದಿನವನ್ನು ಆಚರಿಸಲಾಗುತ್ತಿದ್ದು, ರಾಜ್ಯಾದ್ಯಂತ ವಿಶೇಷ ಕಾರ್ಯಕ್ರಮಗಳು ಆಯೋಜಿತವಾಗಿವೆ. ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸಂದೇಶ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ವಿಜ್ಞಾನ ಮತ್ತು ತಂತ್ರಜ್ಞಾನ ಇಂದು ಮನುಷ್ಯ ಜೀವನದ ಅವಿಭಾಜ್ಯ ಅಂಗ. ಜೀವರಕ್ಷಕ ಔಷಧಗಳನ್ನು

ಕಂಡುಹಿಡಿದ ಮನುಷ್ಯನೇ ವಿನಾಶಕಾರಿ ಪರಮಾಣು ಬಾಂಬನ್ನು ಕಂಡುಹಿಡಿದಿದ್ದಾನೆ ಎನ್ನುವುದು ವಿಪರ್ಯಾಸ. ಹೀಗಾಗಿ ವಿಜ್ಞಾನದ ಸಂಶೋಧನೆಗಳು ಹೆಚ್ಚೆಚ್ಚು ಮಾನವೀಯವೂ, ಮಂಗಳಕರವೂ ಆಗಬೇಕು, ಆಗ ಮಾತ್ರ ವಿಜ್ಞಾನದಿಂದ ವಿಕಾಸ ಸಾಧ್ಯ ಎಂದಿದ್ದಾರೆ. ರಾಷ್ಟ್ರೀಯ ವಿಜ್ಞಾನ ದಿನವಾದ ಇಂದು ನಾವೆಲ್ಲರೂ ಲೋಕಕಲ್ಯಾಣಕ್ಕಾಗಿ ವೈಜ್ಞಾನಿಕ ಮತ್ತು ವೈಚಾರಿಕ ಮನೋಭಾವವನ್ನು ಬೆಳೆಸಿಕೊಳ್ಳುವ ಪ್ರತಿಜ್ಞೆಗೈಯ್ಯೋಣ. ಆ ಮೂಲಕ ಮೌಢ್ಯ, ಕಂದಾಚಾರಮುಕ್ತ ಸಮಾಜ ನಿರ್ಮಿಸೋಣ ಎಂದು ಕರೆ ನೀಡಿದ್ದಾರೆ. ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಅಂಗವಾಗಿ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಸಚಿವಾಲಯದ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಪ್ರತಿಜ್ಞಾವಿಧಿಯನ್ನು ಬೋಧಿಸಿದರು. ಬಳಿಕ ಮಾತನಾಡಿದ ಡಾ. ಶಾಲಿನಿ ರಜನೀಶ್, ವೈಜ್ಞಾನಿಕ ಮನೋಭಾವನೆ ಹಾಗೂ ಮಾನವೀಯ ಮೌಲ್ಯಗಳನ್ನು ಪ್ರತಿಯೊಬ್ಬರೂ ತಮ್ಮ ಪ್ರತಿ ದಿನದ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು. ರಾಷ್ಟ್ರೀಯ ವಿಜ್ಞಾನ ದಿನದ ಪ್ರತಿಜ್ಞಾ ವಿಧಿಯಲ್ಲಿ ತಿಳಿಸಿರುವಂತೆ, ನಾವು ಪ್ರಶ್ನೆಯನ್ನು ಮಾಡದೇ ಯಾವುದೇ ತರ್ಕವನ್ನು ಒಪ್ಪಬಾರದು ಹಾಗೂ ಸಂವಿಧಾನದ ಮೂಲಭೂತ ಕರ್ತವ್ಯದ ಆಶಯದಂತೆ ಮೌಢ್ಯತೆ ಮತ್ತು ಅಂಧಕಾರವನ್ನು ನಿರ್ಮೂಲನೆ ಮಾಡಿ ಜೀವ ಜಗತ್ತಿಗೆ ಪೂರಕವಾದ ಬದುಕನ್ನು ರೂಪಿಸಿಕೊಳ್ಳಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಸತ್ಯವತಿ ಸೇರಿದಂತೆ ಸಚಿವಾಲಯದ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

**<><*<><>*><>**

ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮ ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನದಿಂದ ಜವಾಹರ್ ಲಾಲ್ ನೆಹರು ತಾರಾಲಯ ಆವರಣದಲ್ಲಿ ನಿರ್ಮಿಸಿರುವ "ಯು.ಆರ್ ರಾವ್ ಭವನವನ್ನು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಇಂದು ಉದ್ಘಾಟಿಸಿದರು. ಜವಹಾರ್ ಲಾಲ್ ನೆಹರು ತಾರಾಲಯ ದೇಶದ ಐದು ತಾರಾಲಯಗಳ ಪೈಕಿ ಒಂದಾಗಿದೆ. ಸ್ಮಾರ್ಟ್ ಸಿಟಿ ಮೀಷನ್ ಯೋಜನೆಯಡಿಯಲ್ಲಿ ನೂತನವಾಗಿ ಪರಿಸರ ಸ್ನೇಹಿ ಮಾದರಿಯಲ್ಲಿ ಹೊಸ ಕಟ್ಟಡವನ್ನು ನಿರ್ಮಿಸಲಾಗಿದೆ.

೬೦೦ ಆಸನಗಳ ಸಭಾಂಗಣ, ನಾಲ್ಕು ಉಪನ್ಯಾಸ ಸಭಾಂಗಣ, ೧೦೦ ಆಸನ ಸಾಮರ್ಥ್ಯದ ೧ ಉಪನ್ಯಾಸ ಸಭಾಂಗಣ, ವೀಕ್ಷಣಾ ದೂರದರ್ಶಕ, ತ್ಯಾಜ್ಯ ಸಂಸ್ಕರಣಾ ಘಟಕ, ೫೦ ಕಾರುಗಳಿಗೆ ಪಾರ್ಕಿಂಗ್ ಸೌಲಭ್ಯ ಸೇರಿದಂತೆ ಸುಮಾರು ೪೨ ಕೋಟಿ ರೂಪಾಯಿ ವೆಚ್ಚದಲ್ಲಿ ಈ ಕಟ್ಟಡವನ್ನು ನಿರ್ಮಾಣ ಮಾಡಲಾಗಿದೆ. ಇದೇ ವೇಳೆ ಬೇಸ್ ಸಂಸ್ಥೆ ಅಧ್ಯಕ್ಷರಾದ ಕಿರಣ್ ಕುಮಾರ್ 'ರಾಷ್ಟ್ರೀಯ ವಿಜ್ಞಾನ ದಿನ'ದ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಈ ವೇಳೆ ವಿಧಾನಸಭಾಧ್ಯಕ್ಷರಾದ ಯು ಟಿ ಖಾದರ್, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಚಿವರುಗಳಾದ ಬೋಸರಾಜ್, ಕೃಷ್ಣ ಬೈರೇಗೌಡ, ಪ್ರಿಯಾಂಕ್ ಖರ್ಗೆ ಮತ್ತಿತರರು ಉಪಸ್ಥಿತರಿದ್ದರು.

**<><*<><>*><>**

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಜ್ಞಾನಜ್ಯೋತಿ ಸಭಾಂಗಣದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮದಲ್ಲಿ ಕುಲಪತಿ ಪ್ರೊಫೆಸರ್ ಲಿಂಗರಾಜ ಗಾಂಧಿ ಪ್ರತಿಜ್ಞಾ ವಿಧಿ ಬೋಧಿಸಿದರು. ನಂತರ ಮಾತನಾಡಿದ ಕುಲಪತಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಂದಿನ ಕಾಲಮಾನದಲ್ಲಿ ಅತ್ಯಂತ ಪ್ರಮುಖವಾಗಿದ್ದು, ಯುವ ಜನತೆ ವೈಜ್ಞಾನಿಕ ಮನೋಭಾವ ರೂಢಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಸಂವಿಧಾನದ ಆಶಯದಂತೆ ವೈಜ್ಞಾನಿಕ ಮನೋಧರ್ಮ ಹಾಗೂ ವೈಚಾರಿಕ ಪ್ರಜ್ಞೆ ಬೆಳೆಸಿಕೊಳ್ಳುವುದು ಪ್ರತಿಯೊಬ್ಬ ಪ್ರಜೆಯ ಮೂಲಭೂತ ಕರ್ತವ್ಯಗಳಲ್ಲಿ ಒಂದಾಗಿದೆ ಎಂದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿನಿ ಕೃಪಾ ಬಿ.ಎಂ ಅವರ ಮ್ಯಾಜಿಕ್ ಮಕ್ಕಳ ಕಿರುಹೊತ್ತಿಗೆಯನ್ನು ಕುಲಪತಿ ಬಿಡುಗಡೆಗೊಳಿಸಿದರು. ಕುಲಸಚಿವರಾದ ಟಿ. ಜವರೇಗೌಡ ವಿತ್ತಾಧಿಕಾರಿ ಎಂ.ವಿ. ವಿಜಯಲಕ್ಶ್ಮೀ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

**<><*<><>*><>**

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹಕ್ಕಿಜ್ವರ ಪತ್ತೆಯಾಗಿದೆ. ಚಿಕ್ಕಬಳ್ಳಾಪುರ ತಾಲೂಕಿನ ಕಸಬಾ ಹೋಬಳಿಯ ವರದಹಳ್ಳಿಯಲ್ಲಿ ಇತ್ತೀಚೆಗೆ ಸುಮಾರು ೩೦ ಕೋಳಿಗಳು ಏಕ ಕಾಲದಲ್ಲಿ ಸಾವನ್ನಪ್ಪಿದವು. ಈ ಕೋಳಿಗಳ ಮಾದರಿಯನ್ನು ಪರೀಕ್ಷಿಸಿದ ಬೆಂಗಳೂರಿನ ಭಾರತೀಯ ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆ, ಕೋಳಿಗಳಿಗೆ ಹಕ್ಕಿಜ್ವರ ಸೋಂಕು ತಗುಲಿರುವುದನ್ನು ದೃಢಪಡಿಸಿದೆ. ಕೋಳಿಗಳಲ್ಲಿ ಹಕ್ಕಿಜ್ವರ ಸೋಂಕು ದೃಢಪಟ್ಟಿರುವ ಹಿನ್ನೆಲೆಯಲ್ಲಿ, ಗ್ರಾಮದಲ್ಲಿ ಕೋಳಿ ಸಾಕಾಣಿಕೆ ಮತ್ತು ಹೊರಗಡೆಯಿಂದ ಕೋಳಿಗಳನ್ನು ಗ್ರಾಮಕ್ಕೆ ತರುವುದನ್ನು ನಿರ್ಬಂಧಿಸಿ, ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಆದೇಶ ಹೊರಡಿಸಿದ್ದಾರೆ. ಮೇ ೨೭ರ ವರೆಗೆ ಆದೇಶ ಜಾರಿಯಲ್ಲಿರುತ್ತದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

<><*<><>*><>

ಬೆಂಗಳೂರಿನಲ್ಲಿ ನಡೆಯುತ್ತಿರುವ ಮೂರು ದಿನಗಳ ಬೆಂಗಳೂರು ಗೆಫಿಕ್ಸ್ ೨೦೨೫ ಸಮಾವೇಶದಲ್ಲಿ ತೆರೆಯಲಾಗಿರುವ ವೆವ್ಸ್ ಮಳಿಗೆಗಳಿಗೆ ಮುಂಬರುವ ಮುಂಬೈ ವಿಶ್ವ ಧ್ವನಿ-ಧೃಶ್ಯ ಮತ್ತು ಮನರಂಜನಾ ಶೃಂಗದ ಬಗ್ಗೆ ಮಾಹಿತಿ ನೀಡಲಾಗುತ್ತಿದೆ. ಇದೇ ಮೇ ೧ ರಿಂದ ೪ರವರೆಗೆ ಮುಂಬೈ ವೆವ್ಸ್ ಸಮಾವೇಶ ನಡೆಯಲಿದೆ. ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ಆಯೋಜಿಸಿರುವ ಮುಂದಿನ ವೆವ್ಸ್ ಸಮಾವೇಶದಲ್ಲಿ ಪಾಲ್ಗೊಳ್ಳಲು ಸಂಘ ಸಂಸ್ಥೆಗಳು, ವಿಶ್ವವಿದ್ಯಾನಿಲಯಗಳು ಮತ್ತಿತರರು ಮಾಹಿತಿ ಪಡೆದುಕೊಳ್ಳುತ್ತಿದ್ದಾರೆ.

<><*<><>*><>

ಗ್ರಾಹಕರಿಗೆ ಉತ್ತಮ ಸೇವೆ ನೀಡುವುದರ ಜತೆಗೆ ವಿದ್ಯುತ್ ಉಳಿತಾಯ, ಫೀಡರ್ ನಿರ್ವಹಣೆ ಮತ್ತಿತರ ಹಲವು ವಿಭಾಗಗಳಲ್ಲಿ ಬದ್ಧತೆಯೊಂದಿಗೆ ಕಾರ್ಯನಿರ್ವಹಣೆ ಮಾಡಿರುವ ಹಿನ್ನೆಲೆಯಲ್ಲಿ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ-ಸೆಸ್ಕ್ ಪವರ್ ಫೈನಾನ್ಸ್ ಕಾರ್ಪೋರೇಷನ್ ಆಫ್ ಇಂಡಿಯಾದಿಂದ ’ಎ’ ಶ್ರೇಯಾಂಕ ಪಡೆದುಕೊಂಡಿದೆ. ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ನಿಗಮದ ಅಧ್ಯಕ್ಷ ರಮೇಶ್ ಬಂಡಿಸಿದ್ದೇಗೌಡ, ಸೆಸ್ಕ್‌ನ ನಿರಂತರ ಪರಿಶ್ರಮ, ಉತ್ಕೃಷ್ಟತೆಯ ಬದ್ಧತೆಯಿಂದ ರಾಷ್ಟ್ರ ಮಟ್ಟದಲ್ಲಿ ಕಂಪನಿಗಳ ಶ್ರೇಯಾಂಕ ನೀಡುವ ಪವರ್ ಫೈನಾನ್ಸ್ ಕಾರ್ಪೋರೇಷನ್ ಆಫ್ ಇಂಡಿಯಾ ಎ" ಶ್ರೇಣಿ ನೀಡಿದೆ. ಈ ಶ್ರೇಯಾಂಕ ಪಡೆದ ರಾಜ್ಯದ ಏಕೈಕ ಎಸ್ಕಾಂ ಆಗಿದೆ. ಮುಂದಿನ ದಿನಗಳಲ್ಲಿ "ಎ- ಪ್ಲಸ್" ಶ್ರೇಣಿ ಪಡೆಯುವ ಗುರಿ ಇದೆ ಎಂದು ತಿಳಿಸಿದರು. -ಸೆಸ್ಕ್‌ನ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಉತ್ತಮ ಕಾರ್ಯನಿರ್ವಹಣೆಯಿಂದಾಗಿ ಈ ಶ್ರೇಯಾಂಕ ಪಡೆಯಲು ಸಾಧ್ಯವಾಗಿದೆ. ಇದರಿಂದ ಕೇಂದ್ರ ಮತ್ತು ರಾಜ್ಯದಿಂದ ಅಗತ್ಯ ಅನುದಾನ ಸಿಗುವುದರೊಂದಿಗೆ ಬ್ಯಾಂಕ್ ನಿಂದ ಸಾಲ ಸೌಲಭ್ಯ ಪಡೆಯಲು ಅನುಕೂಲವಾಗಲಿದೆ ಎಂದರು. ಸಮರ್ಪಕ ಹಾಗೂ ಪರಿಣಾಮಕಾರಿಯಾಗಿ ಕಾರ್ಯನಿರ್ವಹಣೆಯಿಂದ ವಿದ್ಯುತ್ ನಷ್ಟ ತಡೆಯುವಲ್ಲಿಯೂ ಸೆಸ್ಕ್ ಪ್ರಗತಿ ಸಾಧಿಸಿದೆ. ಕಳೆದ ಬಾರಿ ಶೇಕಡಾ ೧೦.೩ರಷ್ಟಿದ್ದ ವಿದ್ಯುತ್ ನಷ್ಟದ ಪ್ರಮಾಣ ಇದೀಗ ಶೇಕಡಾ೯.೦೩ಕ್ಕೆ ಇಳಿಕೆಯಾಗಿದೆ. ಮುಂದಿನ ದಿನಗಳಲ್ಲಿ ಇದನ್ನು ಶೇಕಡಾ ೭ಕ್ಕೆ ಕಡಿಮೆಗೊಳಿಸುವ ನಿಟ್ಟಿನಲ್ಲಿ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು. -ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕರಾದ ಜಿ. ಶೀಲಾ ಮಾತನಾಡಿ, ಪಿಎಂ ಕುಸುಮ್-ಸಿ ಯೋಜನೆಯಡಿ ೫೦೦ ಮೆಗಾವ್ಯಾಟ್ ಸೋಲಾರ್ ವಿದ್ಯುತ್ ಉತ್ಪಾದನೆಗೆ ಯೋಜನೆ ರೂಪಿಸಲಾಗಿದ್ದು, ಅದಕ್ಕಾಗಿ ೧೧೦ ವಿತರಣಾ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಮಾಹಿತಿನೀಡಿದರು.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಭಾರತದ ಅತಿದೊಡ್ಡ ಗ್ರೀನ್‌ಫೀಲ್ಡ್ ದೇಶೀಯ ಕಾರ್ಗೋ ಟರ್ಮಿನಲ್ ಆರಂಭವಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**